ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಎ.ಸಿ.ಜೆ.ಎಂ. ನ್ಯಾಯಾಲಯ,
ಉಡುಪಿ.

ಸಿ.ಸಿ.:55/2021
ಪಿ.ಡಬ್ಲ್ಯೂ : 6

| | |
|---|---|
| ಸಾಕ್ಷಿದಾರರ ಹೆಸರು | ಫಾರೂಕ್ |
| ತಂದೆಯ ಹೆಸರು | ಮಹಮ್ಮದ್ ಶರೀಪ್ |
| ವಯಸ್ಸು | 43 ವರ್ಷ |
| ಉದ್ಯೋಗ | ಕೂಲಿ ಕೆಲಸ |
| ವಾಸಸ್ಥಳ | ಕಟಪಾಡಿ |

ದಿನಾಂಕಃ 06-03-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದಃ**

ಚಾಸಾ 1ರವರು ನನ್ನ ತಮ್ಮ ಅವರು ತೀರಿಕೊಂಡಿರುತ್ತಾರೆ. ಚಾಸಾ 1ರವರು ಘಟನೆಯ ಬಗ್ಗೆ ನನಗೆ ಕರೆ ಮಾಡಿ ಯಾವುದೇ ವಿಷಯವನುನ ತಿಳಿಸಿರುವುದಿಲ್ಲ. ದೂರು ನೀಡಿರುವ ಬಗ್ಗೆ ತಿಳಿಸಿರುವುದಿಲ್ಲ. ನಾನು ಪೊಲೀಸಿನವರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ಆರೋಪಿತರ ಪರಿಚಯ ಇರುವುದಿಲ್ಲ.

ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿ ಕೂಲ ಸಾಕ್ಷಿ ಎಂದು ತಿಳಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ ಅನುಮತಿಯನ್ನು ನೀಡಲಾಯಿತು.

**ಪಾಟೀ ಸವಾಲುಃ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿಃ 06-07-2021 ರಂದು ಚಾಸಾ 1 ರವರು ನಿಮಗೆ ಕರೆ ಮಾಡಿ ನಾನು ಮತ್ತು ಚಾಸಾ 2ರವರು ಪಿಕಪ್ ವಾಹನದಲ್ಲಿ ಜಾನುವಾರನ್ನು ತೆಗೆದುಕೊಂಡು ಬರುವಾಗ ಆರೋಪಿತರು ಟೊಯೋಟೋ ವಾಹನದಲ್ಲಿ ಬಂದು ನಮ್ಮನ್ನು ಅಡ್ಡಗಟ್ಟಿ ಕೈಯಿಂದ ಹಲ್ಲೆ ಮಾಡಿ ಅಪಹರಿಸಿ ಜೀವ ಬೆದರಿಕೆ ಹಾಕಿರುತ್ತಾರೆ

ಎಂದು, ದೂರು ನೀಡಿರುತ್ತೇನೆಂದು ತಿಳಿಸಿರುತ್ತೇನೆ ಎಂದರೆ ಸರಿಯಲ್ಲ. ಈ ಬಗ್ಗೆ ದಿಃ 08-07-2021 ರಂದು ಪೊಲೀಸಿನವರಿಗೆ ಹೇಳಿಕೆಯನ್ನು ನೀಡಿರುತ್ತೀರಿ ಎಂದರೆ ಸರಿಯಲ್ಲ. ಹೇಳಿಕೆಯನ್ನು ಸಾಕ್ಷಿಯವರಿಗೆ ಓದಿ ಹೇಳಿದ್ದು ಹೇಳಿಕೆಯನ್ನು ನಿರಾಕರಿಸಿರುತ್ತಾರೆ ಹೇಳಿಕೆಯನ್ನು ನಿಪಿ. 8 ಎಂದು ಗುರುತಿಸಲಾಯಿತು. ಆರೋಪಿಯವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರವಾಗಿ ಶ್ರೀ ಡಿ.ಸಿ. ಎಸ್ ವಕೀಲರಿಂದಃ**

ಪಾಟೀ ಸವಾಲು ಇಲ್ಲವೆಂದು ಮನವಿ ಮಾಡಿರುತ್ತಾರೆ.

ಮರು ವಿಚಾರಣೆಃ ಇಲ್ಲ.

(ತೆರದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ ಎಂದು ಒಪ್ಪಿದ್ದೇನೆ.

ಹೆ.ಹಿ.ಸಿ.ನ್ಯಾ ಮತ್ತು ಎಸಿಜೆಎಂ ಉಡುಪಿ.